**ಕರ್ನಾಟಕ ಸರ್ಕಾರ**

**ಕರ್ನಾಟಕ ರಾಜ್ಯ ಸಹಕಾರ ಚುನಾವಣಾ ಆಯೋಗ**

ಸಂಖ್ಯೆ:ಸಚುಆ/46/ಚುನಾವಣೆ/ಅಸೂ/2013-14

ಕರ್ನಾಟಕ ರಾಜ್ಯ ಸಹಕಾರ ವಸತಿ ಮಹಾಮಂಡಳದ ಕಟ್ಟಡ, ನಂ.3,
2ನೇ ಮಹಡಿ, ಕರಿಯಪ್ಪ ರಸ್ತೆ,
ಬಸವನಗುಡಿ(ಕೃಷ್ಣರಾವ್ ಪಾರ್ಕ್ ಮುಂಭಾಗ)
ಬೆಂಗಳೂರು-560004 ದಿನಾಂಕ: 16.01.2014

**-:ಅಧಿಸೂಚನೆ:-**

**ವಿಷಯ:-** ದಿನಾಂಕ:31.03.2014ಕ್ಕೆ ಅವಧಿ ಮುಗಿಯಲಿರುವ ಮಾಧ್ಯಮಿಕ ಸಹಕಾರ ಸಂಘಗಳು, ಫೆಡರಲ್ ಹಾಗೂ ಅಪೆಕ್ಸ್ ಸಹಕಾರ ಸಂಘಗಳ ಆಡಳಿತ ಮಂಡಲಿಗೆ ಚುನಾವಣೆ ನಡೆಸುವ ಕುರಿತು ಅಧಿಸೂಚನೆ.

**ಉಲ್ಲೇಖ:-**
1. ಆಯೋಗದ ಅಧಿಸೂಚನೆ ಸಚುಆ/31/ಚುನಾವಣೆ/2014/ 2013-14 ದಿನಾಂ:30.10.2013
2. ಸಚುಆ/30/ಜಿಚುಆನೇ-2014/ಪ್ರಾ.ಸಂ/2013, ದಿನಾಂಕ: 17.10.2013
3. ಆಯೋಗದ ಆದೇಶ ಸಂಖ್ಯೆ:ಸಚುಆ/ಡಿಇಓ/ಮಾ.ಸ/45/ 2013-14, ದಿನಾಂಕ:08.01.2014

***

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (ಸಂಕ್ಷಿಪ್ತವಾಗಿ 'ಅಧಿನಿಯಮ') ಪ್ರಕರಣ 39 'ಎ' ದ ಅವಕಾಶದಂತೆ, ಮೊದಲ ಹಂತದಲ್ಲಿ ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಪಟ್ಟಂತೆ ಮಂಡಲಿಗಳಿಗೆ ಸಾಮಾನ್ಯ ಚುನಾವಣೆಯನ್ನು ನಡೆಸುವ ಕುರಿತು. ದಿನಾಂಕಗಳನ್ನು ನಿಗಧಿಪಡಿಸಿ ಉಲ್ಲೇಖ (1) ರಲ್ಲಿ ಕಾಣಿಸಿರುವ ಪತ್ರದಲ್ಲಿ ಅಧಿಸೂಚನೆ ಹೊರಡಿಸಲಾಗಿತ್ತು. ಅದರಂತೆ ಜಿಲ್ಲಾ ಚುನಾವಣಾಧಿಕಾರಿಗಳ ನೇಮಕ, ರಿಟರ್ನಿಂಗ್ ಅಧಿಕಾರಿಗಳ ನೇಮಕ ಮಾಡುವ ಬಗ್ಗೆ ಆಯೋಗವುಈಗಾಗಲೇ ಕ್ರಮ ಕೈಗೊಂಡಿರುತ್ತದೆ.

ಅಧಿನಿಯಮ ಪ್ರಕರಣ 39 ಎ (2) (ಬಿ) ರೀತ್ಯಾ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 26 ಮತ್ತು 26 ಎ ರೀತ್ಯಾ ಎರಡನೇ ಹಂತದಲ್ಲಿ ಮಾಧ್ಯಮಿಕ ಸಂಘಗಳಿಗೆ /ಸಹಕಾರಿಗಳಿಗೆ ಚುನಾವಣೆಗಳನ್ನು ನಡೆಸುವುದಕ್ಕಾಗಿ ಚುನಾವಣೆ ಪ್ರಕ್ರಿಯೆಯು ಪ್ರಾಥಮಿಕ ಸಂಘಗಳ ಚುನಾವಣೆಗಳು ಪೂರ್ಣಗೊಂಡ 15 ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದಾಗಿದೆ, ಹಾಗೂ ಮಂಡಳಿ ಚುನಾವಣೆಗಳನ್ನು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು, 1960 ರ ನಿಯಮ 14(ಎಜಿ) ರ ಅವಕಾಶದಂತೆ ನಡೆಸತಕ್ಕದ್ದಾಗಿದೆ.

ಅಲ್ಲದೇ ಅಧಿನಿಯಮ ಪ್ರಕರಣ 39 ಎ (2) (ಸಿ) ದ ಅವಕಾಶದಂತೆ ಮೂರನೇ ಹಂತದಲ್ಲಿ, ಫೆಡರಲ್ ಸಂಘಗಳ ಚುನಾವಣೆಗಳನ್ನು ನಡೆಸುವುದಕ್ಕೆ ಚುನಾವಣಾ ಪ್ರಕ್ರಿಯೆಯು ಮಾಧ್ಯಮಿಕ ಸಂಘಗಳ ಚುನಾವಣೆಗಳು ಪೂರ್ಣಗೊಂಡ 30 ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದಾಗಿದೆ. ಅಲ್ಲದೇ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 26(ಎ) ರೀತ್ಯಾ ಒಕ್ಕೂಟ ಸಹಕಾರಿಗಳ ಚುನಾವಣೆಯನ್ನು ನಡೆಸತಕ್ಕದ್ದಾಗಿದೆ ಮತ್ತು ಅಧಿನಿಯಮ ಪ್ರಕರಣ 39ಎ(2) (ಡಿ) ರೀತ್ಯಾ ನಾಲ್ಕನೇ ಹಂತದಲ್ಲಿ ಅಪೆಕ್ಸ್ ಸಹಕಾರ ಸಂಘಗಳ ಚುನಾವಣಾ ಪ್ರಕ್ರಿಯೆಯು ಫೆಡರಲ್ ಸಂಘಗಳ ಚುನಾವಣೆಗಳು ಪೂರ್ಣಗೊಂಡ 30 ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದಾಗಿದೆ.

----2

ದಿನಾಂಕ:31.03.2014ಕ್ಕೆ ಅವಧಿ ಮುಗಿಯಲಿರುವ ಸಂಘಗಳ ಆಡಳಿತ ಮಂಡಳಿಗೆ ಮುಂದಿನ ಅವಧಿಗೆ ಚುನಾವಣೆ ನಡೆಯುವವರೆಗೆ ಅಂದು ಇದ್ದ ಆಡಳಿತ ಮಂಡಲಿಗೆ ಅಧಿಕಾರದಲ್ಲಿ ಮುಂದುವರೆಯಲು ಅವಕಾಶ ಕಲ್ಪಿಸುವ ಅಗತ್ಯತೆ ಇರುತ್ತದೆ. ದಿನಾಂಕ:31.03.2014ರ ನಂತರ ಅವಧಿ ಮುಗಿಯುವ ಆಡಳಿತ ಮಂಡಳಿಗೆ ಚುನಾವಣೆ ನಡೆಯುವವರೆಗೆ ಅಧಿಕಾರದಲ್ಲಿ ಮುಂದುವರೆಯಲು ಅವಕಾಶ ಕಲ್ಪಿಸದಿದ್ದಲ್ಲಿ ಶೂನ್ಯ ಉಂಟಾಗುವ ಸನ್ನಿವೇಶವಿರುವುದರಿಂದ ಈ ರೀತಿ ಹಿಂದೆ ಇದ್ದ ಅವಧಿ ಮುಗಿದ ಆಡಳಿತ ಮಂಡಲಿಯವರಿಗೆ ಅಧಿಕಾರದಲ್ಲಿ ಮುಂದುವರೆಯಲು ಅವಕಾಶ ಕಲ್ಪಿಸುವ ಅನಿವಾರ್ಯತೆ ಇರುತ್ತದೆ. ಈ ಸಂಬಂಧ ಸೂಕ್ತ ಆದೇಶವನ್ನು ಹೊರಡಿಸುವಂತೆ (Removal of Difficulties) ಸರ್ಕಾರಕ್ಕೆ 14.08.2013ರಲ್ಲಿ ಪತ್ರ ಬರೆದು ಕೋರಲಾಗಿತ್ತು. ಸಹಕಾರ ಸಂಘಗಳ (ತಿದ್ದುಪಡಿ) ಅಧಿನಿಯಮ 2012ರ ಪ್ರಕರಣ 54 ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತೊಂದರೆಗಳ ನಿವಾರಣೆಗೆ ಆದೇಶ ಹೊರಡಿಸುವಂತೆ ಕೋರಲಾಗಿತ್ತು. ಆದರೆ ಈ ಸಂಬಂಧ ಇದುವರೆಗೆ ಸರ್ಕಾರದಿಂದ ಯಾವುದೇ ಆದೇಶ ಬಂದಿರುವುದಿಲ್ಲ.

ಆದರೆ ಆಯೋಗವು ಮೊದಲ ಹಂತದ ದಿನಾಂಕ:31.03.2014ಕ್ಕೆ ಮಂಡಲಿ ಅವಧಿ ಮುಗಿಯಲಿರುವ ಪ್ರಾಥಮಿಕ ಸಹಕಾರ ಸಂಘಗಳ ಆಡಳಿತ ಮಂಡಲಿಗೆ ಚುನಾವಣೆಗಳನ್ನು ನಡೆಸುವ ಸಂಬಂಧ ಈಗಾಗಲೇ ಜಿಲ್ಲಾ ಚುನಾವಣಾಧಿಕಾರಿಗಳನ್ನು ನೇಮಿಸಿ, ಫೆಬ್ರವರಿ 2 ರಿಂದ ಮಾರ್ಚ್ 03ರ ವರೆಗೆ ಚುನಾವಣಾ ದಿನಾಂಕಗಳನ್ನು ನಿಗಧಿಪಡಿಸಿ ಅಧಿಸೂಚನೆ ಹೊರಡಿಸಿದೆ. ಅಲ್ಲದೇ ರಿಟರ್ನಿಂಗ್ ಆಫೀಸರ್‌ಗಳನ್ನು ನೇಮಿಸುವ ಸಂಬಂಧ ಕ್ರಮವಿಟ್ಟಿರುತ್ತದೆ.

ಈಗಾಗಲೇ ಮೇಲಿನ ಕಂಡಿಕೆಗಳಲ್ಲಿ ವಿವರಿಸಿರುವಂತೆ ಅಧಿನಿಯಮ ಪ್ರಕರಣ 39-ಎ (2) (ಬಿ) ರೀತ್ಯಾ ಎರಡನೇ ಹಂತದಲ್ಲಿ, ಮಾಧ್ಯಮಿಕ ಸಂಘಗಳಿಗೆ ಚುನಾವಣೆಗಳನ್ನು ನಡೆಸುವ ಸಂಬಂಧ ಚುನಾವಣಾ ಪ್ರಕ್ರಿಯೆಯು, ಪ್ರಾಥಮಿಕ ಸಂಘಗಳ ಚುನಾವಣೆಗಳು ಪೂರ್ಣಗೊಂಡ 15 ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದು ಎಂದಿರುತ್ತದೆ., ಹಾಗೂ ಅಧಿನಿಯಮ ಪ್ರಕರಣ 39-ಎ (2) (ಸಿ) ರೀತ್ಯಾ ಮೂರನೇ ಹಂತದಲ್ಲಿ, ಫೆಡರಲ್ ಸಂಘಗಳ ಚುನಾವಣೆಗಳನ್ನು ನಡೆಸುವ ಸಂಬಂಧ ಚುನಾವಣಾ ಪ್ರಕ್ರಿಯೆಯು ಮಾಧ್ಯಮಿಕ ಸಂಘಗಳ / ಸಹಕಾರಿಗಳ ಚುನಾವಣೆಗಳು ಪೂರ್ಣಗೊಂಡ 30 ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದು ಎಂದಿರುತ್ತದೆ. ಅಧಿನಿಯಮ ಪ್ರಕರಣ 39ಎ (2) (ಡಿ) ರೀತ್ಯಾ ನಾಲ್ಕನೇ ಹಂತದಲ್ಲಿ ಅಪೆಕ್ಸ್ ಸಹಕಾರ ಸಂಘಗಳ ಚುನಾವಣಾ ಪ್ರಕ್ರಿಯೆಯು ಫೆಡರಲ್ ಸಂಘಗಳ ಚುನಾವಣೆಗಳು ಪೂರ್ಣಗೊಂಡ 30 ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದು ಎಂದಿರುತ್ತದೆ. ಈ ಹಿನ್ನೆಲೆಯಲ್ಲಿ ಆಯೋಗವು ಮಾಧ್ಯಮಿಕ ಫೆಡರಲ್ ಹಾಗೂ ಅಪೆಕ್ಸ್ ಸಂಘಗಳ ಮಂಡಲಿಗಳ ಚುನಾವಣೆ ನಡೆಸುವ ಸಂಬಂಧ ದಿನಾಂಕಗಳನ್ನು ನಿಗಧಿಪಡಿಸಲು ಉದ್ದೇಶಿಸಿರುತ್ತದೆ.

ಎರಡನೇ ಹಂತದಲ್ಲಿ ಮಾಧ್ಯಮಿಕ ಸಂಘಗಳಿಗೆ ಚುನಾವಣೆಯನ್ನು ನಡೆಸುವ ಸಂಬಂಧ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 2(i-1) ರ ಅವಕಾಶದಂತೆ ಜಿಲ್ಲಾ ಚುನಾವಣಾಧಿಕಾರಿಗಳನ್ನು ನೇಮಿಸಲು ಅವಕಾಶವಿದ್ದು, ಮಾಧ್ಯಮಿಕ ಸಹಕಾರ ಸಂಘಗಳಿಗೆ ಚುನಾವಣೆಗಳನ್ನು ನಡೆಸಲು ಉಲ್ಲೇಖ (3) ರಲ್ಲಿ ಕಾಣಿಸಿರುವ ಪತ್ರದಲ್ಲಿ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರನ್ನು ಜಿಲ್ಲಾ ಚುನಾವಣಾಧಿಕಾರಿಗಳನ್ನಾಗಿ ನೇಮಿಸುವ ಬಗ್ಗೆ ಆಯೋಗ ಈಗಾಗಲೇ ಕ್ರಮ ಕೈಗೊಂಡಿದೆ.

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 13 ಡಿ (2) ರ ಅವಕಾಶದಂತೆ ಸಹಕಾರಿ ಚುನಾವಣಾ ಆಯೋಗವು ಜಿಲ್ಲಾ ಚುನಾವಣಾಧಿಕಾರಿಯಿಂದ ಸಾಮಾನ್ಯ ಚುನಾವಣೆಗಳು ಸನ್ನಿಹಿತವಾಗಿರುವ ಸಹಕಾರ ಸಂಘಗಳ ಪಟ್ಟಿಯನ್ನೊಳಗೊಂಡ ಅಂದರೆ ಜಿಲ್ಲಾ ಚುನಾವಣಾಧಿಕಾರಿಗಳಿಂದ ಅಂಥ ವರದಿಗಳು ಸ್ವೀಕೃತವಾದ ನಂತರ, ಜಿಲ್ಲೆಯೊಳಗಿನ ಪ್ರತಿ ಸಂಘದ ಹೆಸರು / ವಿಳಾಸ ಹಾಗೂ ಸಾಮಾನ್ಯ ಚುನಾವಣೆಯ ದಿನಾಂಕ ಮತ್ತು ಸ್ಥಳಗಳನ್ನು ತಿಳಿಸುವ, ಆಡಳಿತ ಮಂಡಳಿಗಳ ಸಾಮಾನ್ಯ ಚುನಾವಣೆಗಳನ್ನು ನಡೆಸುವ ಮತ್ತು ಮತದಾರರ ಪಟ್ಟಿಗಳನ್ನು ತಯಾರಿಸುವ ಸಂಬಂಧದಲ್ಲಿ ವೇಳಾಪಟ್ಟಿಗಳನ್ನು ಪ್ರಕಟಿಸತಕ್ಕದ್ದು ಎಂದಿರುತ್ತದೆ.

----3

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ಅಧಿನಿಯಮ, 2012 ರ ಪ್ರಕರಣ 39 ಎ ಹಾಗೂ 39ಎಎ ರೀತ್ಯಾ ಯಾವುದೇ ಆಕಸ್ಮಿಕ ಖಾಲಿ ಸ್ಥಾನವನ್ನು ಒಳಗೊಂಡಂತೆ ಸಹಕಾರ ಸಂಘಗಳ ಮಂಡಳಿಯ ಸದಸ್ಯರ ಸಾಮಾನ್ಯ ಚುನಾವಣೆಯನ್ನು ಸಹಕಾರ ಚುನಾವಣಾ ಆಯೋಗದ ಅಧೀಕ್ಷಣೆ, ನಿರ್ದೇಶನ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಡೆಸತಕ್ಕದ್ದಾಗಿದೆ. ರಾಜ್ಯದಲ್ಲಿನ ಸಹಕಾರ ಸಂಘಗಳಿಗೆ ನಡೆಯುವ ಎಲ್ಲಾ ಚುನಾವಣೆಗಳನ್ನು ನಡೆಸುವಿಕೆ, ತತ್ಸಂಬಂಧಿತ ಮತದಾರರ ಪಟ್ಟಿಗಳನ್ನು ಸಿದ್ದಪಡಿಸುವ ಕಾರ್ಯವು ಸಹಕಾರಿ ಚುನಾವಣಾ ಆಯೋಗದ್ದಾಗಿರುತ್ತದೆ.

ಮೇಲ್ಕಂಡ ಎಲ್ಲಾ ಅಂಶಗಳು, ಅಧಿನಿಯಮ /ನಿಯಮಗಳ ಅವಕಾಶವನ್ನು ಆಯೋಗವು ಗಣನೆಗೆ ತೆಗೆದುಕೊಂಡು ಮಾಧ್ಯಮಿಕ ಹಾಗೂ ಫೆಡರಲ್ ಮತ್ತು ಅಪೆಕ್ಸ್ ಸಹಕಾರ ಸಂಘಗಳು ಈ ಕೆಳಕಂಡ ದಿನಾಂಕ/ಅವಧಿಯಲ್ಲಿ ಆಡಳಿತ ಮಂಡಳಿ ಸಾಮಾನ್ಯ ಚುನಾವಣೆಯನ್ನು ನಡೆಸಲು ಆದೇಶಿಸಿದೆ. ಸಂಬಂಧಿಸಿದ ಸಹಕಾರ ಸಂಘಗಳು ಚುನಾವಣೆ ನಡೆಸುವ ಸಂಬಂಧ ಕಾನೂನಿಗೆ/ಬೈಲಾಗಳಿಗೆ ಅನುಗುಣವಾಗಿ ಅಗತ್ಯ ಕ್ರಮವಿಡತಕ್ಕದ್ದು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು/ರಿಟರ್ನಿಂಗ್ ಆಫೀಸರ್‌ಗೆ ಅಗತ್ಯ/ಮಾಹಿತಿ ದಾಖಲೆಗಳನ್ನು ಪರಿಶೀಲನೆಗೆ ನೀಡುವ ಕುರಿತು ನೆರವು ನೀಡತಕ್ಕದ್ದು.

ಮೇಲೆ ವಿವರಿಸಿರುವ ಹಿನ್ನೆಲೆಯಲ್ಲಿ ಮಾಧ್ಯಮಿಕ, ಫೆಡರಲ್ ಹಾಗೂ ಅಪೆಕ್ಸ್ ಸಹಕಾರ ಸಂಘಗಳು ಈ ಕೆಳಕಾಣಿಸಿರುವ ಅವಧಿಯಲ್ಲಿ ಆಡಳಿತ ಮಂಡಳಿ ಚುನಾವಣೆ ನಡೆಸುವ ಬಗ್ಗೆ ಅವಧಿ ಗೊತ್ತುಪಡಿಸಲಾಗಿದೆ.

| ಕ್ರ ಸಂ | ಸಹಕಾರ ಸಂಘಗಳ ವರ್ಗ | ಚುನಾವಣೆ ನಡೆಸಲು ಗೊತ್ತುಪಡಿಸಿದ ದಿನಾಂಕ/ಅವಧಿ |
|---|---|---|
| 1 | ಅಧಿನಿಯಮ ಪ್ರಕರಣ 39ಎ(2)(ಬಿ) ರೀತ್ಯಾ ಹಾಗೂ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 26ಎ<br>ಎರಡನೇ ಹಂತ – ಮಾಧ್ಯಮಿಕ ಸಹಕಾರ ಸಂಘಗಳು/ ಮಾಧ್ಯಮಿಕ ಸಹಕಾರಿಗಳು | ದಿನಾಂಕ:19.04.2014 ರಿಂದ 21.04.2014 ರ ಈ ಅವಧಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿಗೆ ಸೂಕ್ತವೆನಿಸಿದ ಯಾವುದೇ ದಿನಾಂಕದಂದು ಚುನಾವಣೆ ನಡೆಸತಕ್ಕದ್ದಾಗಿದೆ. |
| 2 | ಅಧಿನಿಯಮ ಪ್ರಕರಣ 39ಎ(2)(ಸಿ) ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 26(ಎ) ರೀತ್ಯಾ ಮೂರನೇ ಹಂತ – ಫೆಡರಲ್ ಸಂಘಗಳು/ ಒಕ್ಕೂಟ ಸಹಕಾರಿ | ದಿನಾಂಕ:24.05.2014 ರಿಂದ 26.05.2014 ರ ಈ ಅವಧಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿಗೆ ಸೂಕ್ತವೆನಿಸಿದ ಯಾವುದೇ ದಿನಾಂಕದಂದು ಚುನಾವಣೆ ನಡೆಸತಕ್ಕದ್ದಾಗಿದೆ. |
| 3 | ಅಧಿನಿಯಮ ಪ್ರಕರಣ 39ಎ (2) (ಡಿ), ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 26ಎ ರೀತ್ಯಾ ನಾಲ್ಕನೇ ಹಂತ– ಅಪೆಕ್ಸ್ ಸಂಘಗಳಿಗೆ /ಸಹಕಾರಿಗಳಿಗೆ | ದಿನಾಂಕ:28.06.2014 ರಿಂದ 30.06.2014 ರ ಅವಧಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿಗೆ ಸೂಕ್ತವೆನಿಸಿದ ಯಾವುದೇ ದಿನಾಂಕದಂದು ಚುನಾವಣೆ ನಡೆಸತಕ್ಕದ್ದಾಗಿದೆ. |

i. ಚುನಾವಣೆಗಳನ್ನು ನಡೆಸುವುದಕ್ಕಾಗಿ ಮತ್ತು ಮತದಾರರ ಪಟ್ಟಿಗಳನ್ನು ಸಿದ್ಧಪಡಿಸುವುದಕ್ಕಾಗಿ ತಗಲುವ ವೆಚ್ಚವನ್ನು ಸಂಬಂಧಿಸಿದ ಸಂಘಗಳೇ ಭರಿಸತಕ್ಕದ್ದು.

ii. ಪದಾವಧಿ ಮುಗಿದ ಸಂಘಗಳು, ಕೂಡಲೇ ಚುನಾವಣಾ ಆಯೋಗಕ್ಕೆ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಿಗೆ ವರದಿ ಸಲ್ಲಿಸತಕ್ಕದ್ದು. ಸಹಕಾರ ಚುನಾವಣಾ ಆಯೋಗವು /ಜಿಲ್ಲಾ ಚುನಾವಣಾಧಿಕಾರಿಗಳು ಸುಗಮವಾಗಿ ಮತದಾರರ ಪಟ್ಟಿಗಳನ್ನು ತಯಾರಿಸುವುದಕ್ಕೆ ಮತ್ತು ಚುನಾವಣೆಗಳನ್ನು ನಡೆಸುವುದಕ್ಕೆ ಸಂಬಂಧಿಸಿದ ಸಂಘಗಳ ಆಡಳಿತ ಮಂಡಳಿ ಹಾಗೂ ಮುಖ್ಯ ಕಾರ್ಯನಿರ್ವಾಹಕರು ಅವಶ್ಯಕವಾದ ಎಲ್ಲಾ ನೆರವು, ಸಹಾಯ ಮತ್ತು ಸಹಕಾರವನ್ನು ನೀಡತಕ್ಕದ್ದು.

iii. ಜಿಲ್ಲಾ ಚುನಾವಣಾಧಿಕಾರಿಯು ನಿಯಮ 14 ರೀತ್ಯಾ ಚುನಾವಣೆ ಸಂಬಂಧ ನಮೂನೆ XI ರಲ್ಲಿ ಅಧಿಸೂಚನೆಯನ್ನು ಹೊರಡಿಸತಕ್ಕದ್ದು.

----4

iv. ಆ ನಂತರ ರಿಟರ್ನಿಂಗ್ ಅಧಿಕಾರಿಯು ಉದ್ದೇಶಿತ ಚುನಾವಣೆ ಸಂಬಂಧ ನಮೂನೆ XII ರಲ್ಲಿ 'ನಿಯಮ 14(3)' ರ ಚುನಾವಣಾ ನೋಟೀಸ್ ನೀಡುವ ಕುರಿತು ಜಿಲ್ಲಾ ಚುನಾವಣಾಧಿಕಾರಿ ನಿಗಾವಹಿಸತಕ್ಕದ್ದು ಮತ್ತು ಖಾತರಿ ಪಡಿಸಿಕೊಳ್ಳತಕ್ಕದ್ದು.

v. ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಸಂಬಂಧಿಸಿದ ಸಂಘಗಳ / ಸಹಕಾರಿಗಳ ಮತದಾರರ ಪಟ್ಟಿಗಳನ್ನು ಸಿದ್ದಪಡಿಸುವಿಕೆ ಮತ್ತು ಪರಿಶೀಲನೆ, ಚುನಾವಣೆ ಸಿಬ್ಬಂದಿ, ಮತದಾನ ವ್ಯವಸ್ಥೆ, ಮತಕೇಂದ್ರಗಳ ಪರಿಶೀಲನೆ, ಮತ ಏಣಿಕೆ ವ್ಯವಸ್ಥೆ, ಚುನಾವಣಾ ಸಾಮಗ್ರಿಗಳ ವ್ಯವಸ್ಥೆ, ಚುನಾವಣೆ ಕೆಲಸ ಕಾರ್ಯಗಳ ಉಸ್ತುವಾರಿ ಕುರಿತಂತೆ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಅಗತ್ಯ ಸಹಕಾರ ನೀಡತಕ್ಕದ್ದು.

vi. ಸಹಕಾರ ಸಂಘಗಳ ಚುನಾವಣೆಗಳನ್ನು ನಡೆಸುವ ಸಂಬಂಧ ಸಹಕಾರ ಸಂಘಗಳ / ಸಹಕಾರಿಗಳ ಮುಖ್ಯ ಕಾರ್ಯನಿರ್ವಾಹಕರು ಅಧಿನಿಯಮ / ನಿಯಮಗಳ ಅವಕಾಶದಂತೆ ಕ್ರಮ ಕೈಗೊಳ್ಳುವುದು ಮತ್ತು ಸಂಘಗಳ /ಸಹಕಾರಿಗಳ ಆಡಳಿತ ಮಂಡಳಿ ಮತ್ತು ಮುಖ್ಯ ಕಾರ್ಯನಿರ್ವಾಹಕರು, ಜಿಲ್ಲಾ ಚುನಾವಣಾಧಿಕಾರಿಗಳ ನಿರ್ದೇಶನಗಳನ್ವಯ ಹಾಗೂ ನಿಯಮಾನುಸಾರ ಅಗತ್ಯ ಕ್ರಮವಿಡಲು ಆದೇಶಿಸಿದೆ.

(ಎನ್.ಸಿ. ಮುನಿಯಪ್ಪ)
**ಸಹಕಾರ ಚುನಾವಣಾ ಆಯುಕ್ತರು**

ಇವರಿಗೆ:-

1. ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹು ಅಂತಸ್ತುಗಳ ಕಟ್ಟಡ, ಬೆಂಗಳೂರು, 6ನೇ ಮಹಡಿ, ಬೆಂಗಳೂರು-560 001.
2. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-560052.
3. ಸಹಕಾರ ಸಂಘಗಳ ನಿಬಂಧಕರ ಕಛೇರಿಯ ಎಲ್ಲಾ ಅಪರ ನಿಬಂಧಕರಿಗೆ
4. ಸಹಕಾರ ಸಂಘಗಳ ನಿಬಂಧಕರ ಕಛೇರಿಯ ಎಲ್ಲಾ ಜಂಟಿ ನಿಬಂಧಕರಿಗೆ
5. ಸಹಕಾರ ಸಂಘಗಳ ಜಂಟಿ ನಿಬಂಧಕರು, ------------ಪ್ರಾಂತ್ಯ--------------- ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು (ಮಾಧ್ಯಮಿಕ ಸಹಕಾರ ಸಂಘಗಳು)
6. ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರು
7. ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರಿಗೆ,
8. ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಬೆಂಗಳೂರು
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ, ಸಹಕಾರಿ ಮಾರಾಟ ಮಹಾಮಂಡಲಿ ನಿ., ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ, ಸಹಕಾರಿ ಮಹಾಮಂಡಲಿ ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
11. ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., -----------------
12. ನಿರ್ದೇಶಕರು, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು
13. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು
14. ವ್ಯವಸ್ಥಾಪಕ ನಿರ್ದೇಶಕರು, ಹಾಪ್‌ಕಾಮ್ಸ್, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಸ್ಪಿನ್ನಿಂಗ್ ಮಿಲ್ಸ್ ಫೆಡರೇಷನ್, ಬೆಂಗಳೂರು
16. ರಾಜ್ಯಮಟ್ಟದ ಎಲ್ಲಾ ಮಹಾಮಂಡಲಿಗಳ ವ್ಯವಸ್ಥಾಪಕ ನಿರ್ದೇಶಕರಿಗೆ
17. ರಕ್ಷಕಡತ / ಕಛೇರಿ ಪ್ರತಿ.